**2 ನೇ ಹೆಚ್ಚುವರಿ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ನಂಜನಗೂಡು**

**ಸಿ.ಸಿ 9163/2022 ಸಿ. ಡಬ್ಲುಃ 02**

**ಪಿ. ಡಬ್ಲುಃ 02**

| | |
|---|---|
| ಸಾಕ್ಷಿದಾರರ ಹೆಸರು<br>ತಂದೆ/ಗಂಡನ ಹೆಸರು<br>ವಯಸ್ಸು<br>ಕೆಲಸ<br>ವಾಸ | ಶಂಕರನಾಯಕ<br>ಲೇ. ಮಾದನಾಯಕ<br>48 ವರ್ಷ<br>ಕೂಲಿ ಕೆಲಸ<br>ಮಲ್ಲಹಳ್ಳಿ. |
| | **ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ 25-02-2026** |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ವಕೀಲರಿಂದಃ**

ಸಾಕ್ಷಿಗೆ ಒಂದು ದಾಖಲೆ ತೋರಿಸಿದ್ದು ಅದು ಸ್ಥಳ ಮಹಜರ್ ಆಗಿದ್ದು ಅದನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಗಿದ್ದು, ಅದರ ಮೇಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು.

ನಿಪಿ-2 ರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನಿಪಿ-2 ಕ್ಕೆ ಸುಮಾರು 4 ವರ್ಷಗಳ ಹಿಂದೆ ಪೊಲೀಸರ ಕೋರಿಕೆ ಮೇರೆಗೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನಿಪಿ-2 ಕ್ಕೆ ನನ್ನನ್ನು ಹೊರತುಪಡಿಸಿ ಬೇರೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ.

ಸಾಕ್ಷಿಗೆ ಒಂದು ದಾಖಲೆ ತೋರಿಸಿದ್ದು ಅದು ಅಮಾನತ್ತು ಮಹಜರ್ ಆಗಿದ್ದು ಅದನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಗಿದ್ದು, ಅದರ ಮೇಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು.

ನಿಪಿ-3 ರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನಿಪಿ-3 ಕ್ಕೆ ಸುಮಾರು 4 ವರ್ಷಗಳ ಹಿಂದೆ ಪೊಲೀಸರ ಕೋರಿಕೆ ಮೇರೆಗೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನಿಪಿ-3 ಕ್ಕೆ ನನ್ನನ್ನು ಹೊರತುಪಡಿಸಿ ಬೇರೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ.

ಪೊಲೀಸರು ನನ್ನನ್ನು ವಿಚಾರಣೆ ಮಾಡಿ ಯಾವುದೇ ಹೇಳಿಕೆ ಪಡೆದಿಲ್ಲ. ಈ ಪ್ರಕರಣದ ವಿದ್ಯಮಾನ ಗೊತ್ತಿಲ್ಲ.

(ಸಸಅ ಅವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿಸಲು ಅನುಮತಿಯನ್ನು ಕೋರಿದ್ದು ಅನುಮತಿಯನ್ನು ನೀಡಲಾಯಿತು)

**ಪಾಟೀ ಸವಾಲುಃ ಮಾನ್ಯ ಎಪಿಪಿ ಯವರಿಂದ**

ದಿಃ 20-10-2022 ರಂದು ಪೋಲೀಸರು ನನ್ನನ್ನು ಮತ್ತು ಚಾಸಾ-1 ಮತ್ತು 3 ರವರು ಬರಮಾಡಿಕೊಂಡು ನಾನೇ ಕೃತ್ಯ ನಡೆದ ಸ್ಥಳವನ್ನು ತೋರಿಸಿದ ಮೇರೆಗೆ 14-00 ಗಂಟೆಯಿಂದ 15-00 ಗಂಟೆಯವರಗೆ ಮಹಜರು ಕ್ರಮವನ್ನು ಜರುಗಿಸಿ

ದಿಃ 20-10-2022 ರಂದು ಪೋಲೀಸರು ನನ್ನನ್ನು ಮತ್ತು ಚಾಸಾ-1 ಮತ್ತು 3 ರವರು ಬರಮಾಡಿಕೊಂಡು 16-00 ಗಂಟೆಯಿಂದ 16-45

ಗಂಟೆಯವರಗೆ ಅಮಾನತ್ತು ಮಹಜರು ಕ್ರಮವನ್ನು ಜರುಗಿಸಿ ಅಪಘಾತ ಪಡಿಸಿದ ಕೆಎ-09-ವೈ-3727 ಹಿರೋ ಹೊಂಡಾ ಪ್ಯಾಶನ್ ಬೈಕನ್ನು ವಾಹನವನ್ನು ಮುಂದಿನ ಕ್ರಮಕ್ಕಾಗಿ ಪೋಲೀಸರು ಅಮಾನತ್ತು ಪಡಿಸಿಕೊಂಡರು ಎಂದರೆ ಸರಿಯಲ್ಲ. ನಿಪಿ-3 ನ್ನು ಓದಿ ಹೇಳಿ ಸ್ಥಳದಲ್ಲಿ ನನ್ನ ಹಾಗೂ ಚಾಸಾ-1 ಮತ್ತು 3 ರವರ ಸಹಿ ಪಡೆದುಕೊಂಡರು ಎಂದರೆ ಸರಿಯಲ್ಲ.

ದಿಃ 02-11-2022 ರಂದು ಪೋಲೀಸರು ನನ್ನನ್ನು ವಿಚಾರಣೆ ಮಾಡಿ ಮರು ಹೇಳಿಕೆ ಪಡೆದುಕೊಂಡರು ಎಂದರೆ ಸರಿಯಲ್ಲ.

ದಿ.19-10-2022 ರಂದು ಬೆಳಗ್ಗೆ ನಾನು ಮತ್ತು ಚಾಸಾ-1 ರವರು ಮನೆಯಲ್ಲಿ ಇದ್ದಾಗ ಚಾಸಾ-5 ರವರು ನನಗೆ ದೂರವಾಣಿ ಕರೆ ಮಾಡಿ ನಿಮ್ಮ ಮಾವ ಬಸವರಾಜನಾಯಕ ರವರು ಬೈಕಿನಲ್ಲಿ ನಿಮಂ ಅತ್ತೆ ಸೀರಮ್ಮಳನ್ನು ಕೂರಿಸಿಕೊಂಡು ಹೋಗುತ್ತಿದ್ದಾಗೆ ಸೀರಮ್ಮ ಬಿದ್ದು ಪೆಟ್ಟಾಗಿ ನಂಜನಗೂಡು ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗುತ್ತಿರುವುದಾಗಿ ನೀವು ಅಲ್ಲಿ ಬನ್ನಿ ಎಂದು ತಿಳಿಸಿದರು ಎಂದರೆ ಸರಿಯಲ್ಲ. ತಕ್ಷಣ ನಾನು ಮತ್ತು ನಂಜನಗೂಡು ಆಸ್ಪತ್ರೆಗೆ ಹೋಗಿ ನೋಡಲಾಗಿ ಮೃತ ಸೀರಮ್ಮಳಿಗೆ ತಲೆಗೆ ಮತ್ತು ಇತರ ಕಡೆಗೆ ಪೆಟ್ಟಾಗಿದ್ದು ಪರೀಕ್ಷಿಸಿದ ವೈದ್ಯರು ಮೃತ ಪಟ್ಟಿರುವುದಾಗಿ ತಿಳಿಸಿದರು ಎಂದರೆ ಸರಿಯಲ್ಲ. ಅಲ್ಲೆ ಇದ್ದ ಚಾಸಾ-5 ರವರು ಕೇಳಲಾಗಿ ನಾನು ನಂಜನಗೂಡು ತಾಂಡ್ಯ ಕೈಗಾರಿಕಾ ಪ್ರದೇಶದಲ್ಲಿ ನನ್ನ ಸ್ನೇಹಿತನನ್ನು ನೋಡಲು ಹೋಗಿದ್ದಾಗ ಬೆಳಗ್ಗೆ 11-30 ಗಂಟೆ ಸಮಯದಲ್ಲಿ ಬೈಕಿನಲ್ಲಿ ಪದ್ಮಾವತಿ ಮಾರ್ಬಲ್ ಅಂಗಡಿ ಸಮೀಪ ಹೋಗುತ್ತಿದ್ದಾಗ ಅದೇ ಸಮಯಕ್ಕೆ ಒಬ್ಬ ಮೋಟಾರು ಸೈಕಲ್ ಚಾಲಕ ಬೈಕಿನಎನ ಹಿಂಭಾಗ ಒಬ್ಬ ಹೆಂಗಸನ್ನು ಕೂರಿಸಿಕೊಂಡು ಅತಿವೇಗ ಹಾಗೂ ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬರುತ್ತಿದದರು ಎಂದರೆ ಸರಿಯಲ್ಲ. ಮತ್ತು ಹಿಂಭಾಗದಲ್ಲಿ ಕುಳಿತಿದ್ದ ಹೆಂಗಸು ಕೆಳಕ್ಕೆ ಬಿದ್ದರು ಎಂದು

ತಿಳಿಸಿದರು ಎಂದರೆ ಸರಿಯಲ್ಲ. ನಂತರ ನಾನು ಬೈಕ್ ಅನ್ನು ನಿಲ್ಲಿಸಿ ನೋಡಲಾಗಿ ಅವರು ನಿಮ್ಮ ಅತ್ತೆ ಸೀರಮ್ಮ ಆಗಿದ್ದರು ಅವರ ಗಂಡ ಬಸವರಾಜು ಎಂದು ತಿಳಿಸಿದರು ಎಂದರೆ ಸರಿಯಲ್ಲ. ನಂತರ ಬೈಕ್ ನಂಬರ್ ನೋಡಲಾಗಿ ಕೆಎ-09-ವೈ-3727 ಆಗಿತ್ತು ಎಂದು ತಿಳಿಸಿದರು ಎಂದರೆ ಸರಿಯಲ್ಲ. ನಂತರ ಸದರಿ ವಿಚಾರವನ್ನು ನನಗೆ ಫೋನ್ ಮಾಡಿ ತಿಳಿಸಿದರು ಎಂದರೆ ಸರಿಯಲ್ಲ. ಈ ಅಪಘಾತದ ಸಂಬಂಧ ಚಾಸಾ-1ರವರ ಆರೋಪಿ ವಿರುದ್ಧ ದೂರು ನೀಡಿದ್ದು ಪ್ರಕರಣ ದಾಖಲಾಗಿತ್ತದೆ ಎಂದರೆ ಸರಿಯಲ್ಲ.

ದಿಃ 02-11-2022 ರಂದು ಪೋಲೀಸರು ನನ್ನನ್ನು ವಿಚಾರಣೆ ಮಾಡಿ ನನ್ನ ಹೇಳಿಕೆಪಡೆದುಕೊಂಡು ಎಂದರೆ ಸರಿಯಲ್ಲ.

ಸಾಕ್ಷಿಗೆ ಹೇಳಿಕೆ ಭಾಗವನ್ನು ಓದಿ ಹೇಳಲಾಗಿ ಸಾಕ್ಷಿ ಸದರಿ ಹೇಳಿಕೆ ಭಾಗವನ್ನು ಅಲ್ಲಗಳೆದಿದ್ದರಿಂದ ಕೆಂಪು ಶಾಯಿಯಿಂದ ಗುರುತಿಸಲಾದ ಭಾಗವನ್ನು ನಿಪಿ-5 ಎಂದು ಗುರುತಿಸಲಾಯಿತು. ನಿಪಿ-5 ರಲ್ಲಿ ಬರೆದಿರುವ ವಿಚಾರ ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**2 ನೇ ಕಿ.ಪ್ರ.ದ. ನ್ಯಾ ದಂ. ನಂಜನಗೂಡು**